# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಸಮಾಜ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಯೋಜನೆ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ವೇತನ ವೆಚ್ಚ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳ ಪತ್ರಗಳು
3. ಆರ್ಥಿಕ ಇಲಾಖೆ ವೆಚ್ಚ 7 ಶಾಖೆಗಳ ಕಡತ.

**ಪ್ರಸ್ತಾವನೆ:**

ವಿವಿಧ ಜಿಲ್ಲಾ ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಸಮಾಜ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಯೋಜನೆ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ವೇತನ ವೆಚ್ಚ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಹೆಚ್ಚುವರಿ ಪ್ರಧಾನ ಲೆಕ್ಕ ಶೀರ್ಷಿಕೆ 2210, 2205, 2225, 2235, 2515 ಮತ್ತು 3451ರಡಿ ಒಟ್ಟು ರೂ.146.33ಲಕ್ಷಗಳನ್ನು ಹೆಚ್ಚುವರಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯಿತಿ ಕಾರ್ಯಕ್ರಮದಡಿ ರೂ.146.33ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 412 ವೆಚ್ಚ 6/2022(ಇ) ದಿನಾಂಕ: 08 ಜೂನ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಅನುದಾನವನ್ನು ಕಾಲಂ 5ರ ಲೆಕ್ಕ ಶೀರ್ಷಿಕೆಯಡಿ ರೂ.146.33ಲಕ್ಷ (ರೂಪಾಯಿ ಒಂದು ನೂರ ನಲವತ್ತಾರು ಲಕ್ಷದ ಮೂವತ್ಮೂರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಲೆಕ್ಕ ಶೀರ್ಷಿಕೆ 2515-00-101-0-26-033, 034, 021 ಮತ್ತು 251ರಡಿ ಬಿಡುಗಡೆಗೊಳಿಸಿರುವ ಅನುದಾನಕ್ಕೆ ಮರು ಹೊಂದಾಣಿಕೆ ಅಗತ್ಯವಿರುವುದಿಲ್ಲ. ಅದೇ ಕಾರ್ಯಕ್ರಮದಡಿ ವೆಚ್ಚ ಭರಿಸುವುದು.

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಅಗತ್ಯವಿರುವ ಅನುದಾನ (ರೂ.ಲಕ್ಷಗಳಲ್ಲಿ) | ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | ವಿಜಯನಗರ | 2515-00-101-0-26-034 | 41.00 | 64.77 |
| 2 | ವಿಜಯನಗರ | 3451-00-101-0-26-005 | 23.77 | |
| 3 | ಚಾಮರಾಜನಗರ | 2235-00-101-0-27-005 | 0.50 | 0.50 |
| 5 | ಉಡುಪಿ | 2225-00-103-0-51-005 | 11.73 | 11.73 |
| 6 | ರಾಮನಗರ | 2210-00-101-0-32-005 | 21.28 | 21.28 |
| 7 | ಬೆಂಗಳೂರು ನಗರ | 3451-00-101-0-26-005 | 13.91 | 13.91 |
| 9 | ಧಾರವಾಡ | 2205-00-104-0-27-005 | 1.85 | 1.85 |
| 11 | ತುಮಕೂರು | 2205-00-104-0-27-005 | 0.91 | 0.91 |
| 12 | ಕೋಲಾರ | 2205-00-104-0-27-005 | 0.88 | 0.88 |
| 13 | ಬೆಂಗಳೂರು ಗ್ರಾಮಾಂತರ | 2225-00-103-0-51-005 | 30.50 | 30.50 |
| | | ಒಟ್ಟು | | **146.33** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1.ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು

2.ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.

3.ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು.

4.ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು

5.ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು.

6.ಆರ್ಥಿಕ ಇಲಾಖೆ,ವೆಚ್ಚ-7 ಶಾಖೆಯ ಕಡತಕ್ಕೆ.

7.ರಕ್ಷಾ ಕಡತಕ್ಕೆ

8.ಹೆಚ್ಚುವರಿ ಪ್ರತಿ